ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1095
2. ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 29.09.2020
4. ಉತ್ತರಿಸುವ ಸಚಿವರು : ಸಹಕಾರ ಸಚಿವರು

* * * *

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಎ.ಪಿ.ಎಂ.ಸಿ. ಕಾಯ್ದೆ ತಿದ್ದುಪಡಿಗೆ ಕಾರಣಗಳೇನು;	ಕೇಂದ್ರ ಸರ್ಕಾರವು ಕೃಷಿ ಮಾರಾಟ ಕ್ಷೇತ್ರವನ್ನು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯ ಕೃಷಿ ಉತ್ಪನ್ನ ಮತ್ತು ಜಾನುವಾರು ಮಾರಾಟ (ಉತ್ತೇಜನ ಮತ್ತು ಅನುಕೂಲಗೊಳಿಸುವಿಕೆ) ಮಾದರಿ ಕಾಯ್ದೆ 2017ನ್ನು ದಿನಾಂಕ:24.04.2017 ರಲ್ಲಿ ರಚಿಸಿದ್ದು, ರಾಜ್ಯ ಸರ್ಕಾರಗಳು ತಮ್ಮ ರಾಜ್ಯದಲ್ಲಿನ ಕಾಯ್ದೆಗಳನ್ನು ಕೇಂದ್ರ ಸರ್ಕಾರದ ಮಾದರಿ ಕಾಯ್ದೆಯ ಅಂಶಗಳಿಗೆ ಅನುಗುಣವಾಗಿ ಸೂಕ್ತ ತಿದ್ದುಪಡಿಯನ್ನು ಶೀಘ್ರದಲ್ಲಿ ಕೈಗೊಳ್ಳುವಂತೆ ಕೋರಿರುತ್ತದೆ. ರಾಜ್ಯ ಸರ್ಕಾರಗಳು ತಮ್ಮ ಸ್ಥಳೀಯ ಅವಶ್ಯಕತೆಗಳಿಗೆ ತಕ್ಕಂತೆ ಸೂಕ್ತ ಬದಲಾವಣೆಗಳನ್ನು ಮಾಡಿಕೊಳ್ಳಲು ಹಾಗೂ ಈ ಎಲ್ಲಾ ಬದಲಾವಣೆ ಮಾಡುವಲ್ಲಿ ಸ್ಪರ್ಧಾತ್ಮಕತೆ ಹಾಗೂ ರೈತರ ಹಿತಾಸಕ್ತಿ ಮೊದಲು ಎಂಬ ತತ್ವಗಳನ್ನು ಗಮನದಲ್ಲಿರಿಸಿಕೊಳ್ಳಲು ಸಹ ತಿಳಿಸಿರುತ್ತದೆ. ಪ್ರಸ್ತುತ ಕೇಂದ್ರ ಸರ್ಕಾರದ ಮಾದರಿ ಕಾಯ್ದೆ–2017 ರಲ್ಲಿನ ಒಂಬತ್ತು ಪ್ರಮುಖ ಸುಧಾರಣೆಗಳ ಪೈಕಿ ರಾಜ್ಯ ಸರ್ಕಾರವು ಎಂಟು ಸುಧಾರಣೆಗಳನ್ನು ಕೈಗೊಂಡಿದ್ದು, ಉಳಿದಂತೆ ಮಾರುಕಟ್ಟೆ ಸಮಿತಿಗಳು ನಿಯಂತ್ರಣವನ್ನು ಮಾರುಕಟ್ಟೆ ಪ್ರಾಂಗಣಗಳ ಭೌತಿಕ ಆವರಣಕ್ಕೆ ಸೀಮಿತಗೊಳಿಸುವುದಕ್ಕೆ ಸಂಬಂಧಿಸಿದಂತೆ ಮಾರುಕಟ್ಟೆ ಕಾಯ್ದೆಗೆ ತಿದ್ದುಪಡಿ ತರಲು ಉದ್ದೇಶಿದೆ. ಕೇಂದ್ರ ಸರ್ಕಾರದ ಪ್ರಸ್ತಾಪಿತ ಸುಧಾರಣೆಗಳ ಪೈಕಿ ಮೇಲ್ಕಂಡ ಸುಧಾರಣೆಯನ್ನು ಜಾರಿಗೆ ತರುವ ಸಂಬಂಧ ಹಾಗೂ ರೈತ ತಾನು ಬೆಳೆದ ಬೆಳೆಯನ್ನು ತನ್ನಿಚ್ಛೆಯಂತೆ ಎಪಿಎಂಸಿ ಪ್ರಾಂಗಣ ಅಥವಾ ಪ್ರಾಂಗಣದ ಹೊರಗೆ ಮಾರಾಟ ಮಾಡುವ ಸ್ವಾತಂತ್ರ ನೀಡಲು ಮತ್ತು ಎಪಿಎಂಸಿ ಕಾಯ್ದೆಯ ನಿಯಂತ್ರಣವನ್ನು ಪ್ರಾಂಗಣಕ್ಕೆ ಸೀಮಿತಗೊಳಿಸಿ ಮಾರುಕಟ್ಟೆ ವ್ಯವಸ್ಥೆಯನ್ನು ಸರಳೀಕರಣಗೊಳಿಸುವ ಉದ್ದೇಶದೊಂದಿಗೆ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2), ಕಲಂ 8(3) ಹಾಗೂ ಕಲಂ 117 ಕ್ಕೆ ಕರ್ನಾಟಕ ಅಧ್ಯಾದೇಶ ಸಂಖ್ಯೆ: 08/2020ರ ಮೂಲಕ ದಿನಾಂಕ: 16.05.2020 ರಂದು ತಿದ್ದುಪಡಿ ಮಾಡಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ.

...2

13

ಆ.	ಈ ಕಾಯ್ದೆ ತಿದ್ದುಪಡಿಯಿಂದ ರೈತರಿಗೆ ಆಗುವ ಅನಾನುಕೂಲಗಳ ಬಗ್ಗೆ ಸರ್ಕಾರಕ್ಕೆ ಅರಿವಿದೆಯೇ;	ಮಾರುಕಟ್ಟೆ ವ್ಯವಸ್ಥೆಯನ್ನು ಸರಳೀಕರಣಗೊಳಿಸುವ ಉದ್ದೇಶದಿಂದ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ಕ್ಕೆ ಸುಗ್ರೀವಾಜ್ಞೆ ಮೂಲಕ ತಿದ್ದುಪಡಿ ತರಲಾಗಿದೆ.
ಇ.	ಕಾಯ್ದೆ ತಿದ್ದುಪಡಿ ಮಾಡುವಾಗ ಸರ್ವಪಕ್ಷಗಳ ಸಭೆ ಕರೆಯದಿರುವುದಕ್ಕೆ ಕಾರಣಗಳೇನು;	ಸಂಬಂಧಪಟ್ಟ ವಿವಿಧ ಬಾಧಿತ ಸಂಘ-ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ಹಲವು ಹಂತಗಳಲ್ಲಿ ಸಮಾಲೋಚಿಸಲಾಗಿರುತ್ತದೆ
ಈ.	ಕಾಯ್ದೆ ತಿದ್ದುಪಡಿ ವಿರುದ್ಧ ರೈತರು ಪ್ರತಿಭಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಉ.	ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ನಿರ್ಧಾರವೇನು?	ರೈತರ ಹಿತಾಸಕ್ತಿಗಳಿಗೆ ಯಾವುದೇ ಧಕ್ಕೆ ಬಾರದಂತಹ ಅಂಶಗಳನ್ನು ಕಾಯ್ದೆಯಲ್ಲಿ ಅಳವಡಿಸಲಾಗಿದೆ.

(ಸಂಖ್ಯೆ:ಸಿಒ 494 ಎಂಆರ್ಇ 2020)

(ಎಸ್.ಟಿ.ಸೋಮಶೇಖರ್)

ಸಹಕಾರ ಸಚಿವರು